<u>**ಕರ್ನಾಟಕ ವಿಧಾನ ಪರಿಷತ್ತು**</u>

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 90 (628)
ಸದಸ್ಯರ ಹೆಸರು : ಶ್ರೀ ಎಸ್.ವ್ಹಿ ಸಂಕನೂರ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 11-12-2023
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗೆ ಪದೋನ್ನತಿ ನೀಡಲು ಸಿ&ಆರ್ ನಿಯಮದಲ್ಲಿ ಅವಕಾಶ ಇದೆಯೇ; ಹಾಗಿದ್ದಲ್ಲಿ ನೇರ ನೇಮಕಾತಿ ಹಾಗೂ ಪದೋನ್ನತಿಯ ಮೂಲಕ ಮಾಡಲು ಇರುವ ಅನುಪಾತ ಎಷ್ಟು; (ಮಾಹಿತಿ ನೀಡುವುದು) | ಹೌದು.<br><br>2014ರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ನೇರ ನೇಮಕಾತಿಗೆ ಶೇ.75 ರಷ್ಟು ಮತ್ತು ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗೆ ಶೇ.25 ರಷ್ಟು ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿದೆ. |
| ಆ) | ಸಿ & ಆರ್ ಅನುಪಾತದ ಪ್ರಕಾರ ಸಹ ಶಿಕ್ಷಕರನ್ನು ಉಪನ್ಯಾಸಕರನ್ನಾಗಿ ಪದೋನ್ನತಿ ನೀಡಲಾಗಿದೆಯೇ; (ವಿವರ ನೀಡುವುದು) | ಸರ್ಕಾರಿ ಪ್ರೌಢಶಾಲೆಯ ಸಹ ಶಿಕ್ಷಕರುಗಳಿಗೆ ಪ್ರಸ್ತುತ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮದಲ್ಲಿನ ಅನುಪಾತದನ್ವಯ ಉಪನ್ಯಾಸಕರನ್ನಾಗಿ ಪದೋನ್ನತಿ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ) | ಈ ಹಿಂದೆ ಯಾವ ವರ್ಷದಲ್ಲಿ ಸಹ ಶಿಕ್ಷಕರ ಹುದ್ದೆಯಿಂದ ಉಪನ್ಯಾಸಕರ ಹುದ್ದೆಗೆ ಪದೋನ್ನತಿ ನೀಡುವ ಪ್ರಕ್ರಿಯೆ ನಡೆಸಲಾಗಿದೆಯೇ ಸಂಪೂರ್ಣ ಮಾಹಿತಿಯನ್ನು ನೀಡುವುದು? | 1998ರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ 2011-12ನೇ ಸಾಲಿನಲ್ಲಿ ಪ್ರೌಢಶಾಲಾ ಸಹಶಿಕ್ಷಕರ ವೃಂದದಿಂದ ಉಪನ್ಯಾಸಕರ ವೃಂದಕ್ಕೆ ಒಟ್ಟು 1184 ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿ ನೀಡಿ ಆದೇಶಿಸಲಾಗಿದೆ. |

**ಸಂಖ್ಯೆ: ಇಪಿ 217 ಡಿಜಿಡಬ್ಲ್ಯೂ 2023**

(ಎಸ್. ಮಧು ಬಂಗಾರಪ್ಪ )
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು